ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿ.ಟಿ.ಇ 01 ಇಎಪಿ 2024

ಆಯುಕ್ತರವರ ಕಛೇರಿ.
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದಿನಾಂಕ:24.04.2025

**ಸುತ್ತೋಲೆ**

| | |
|---|---|
| ವಿಷಯ: | ಸಿ-03, ಪಠ್ಯಕ್ರಮದಲ್ಲಿ ಪ್ರವೇಶ ಪಡೆದು ಅನುತ್ತೀರ್ಣಗೊಂಡಿರುವ ವಿದ್ಯಾರ್ಥಿಗಳು ಏಪ್ರಿಲ್/ಮೇ 2025 ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಪರೀಕ್ಷಾ ಶುಲ್ಕದ ಜೊತೆಗೆ ಸಮಾನಾಂತರವಲ್ಲದ (No Equivalent) ಪ್ರತಿ ವಿಷಯಗಳಿಗೆ ರೂ.1000/- ಶುಲ್ಕ ಪಾವತಿಸುವ ಬಗ್ಗೆ. |
| ಉಲ್ಲೇಖ: | 1) ಏಕ ಕಡತ ಸಂಖ್ಯೆ:DTE-EXAM0EPS/15/2024<br>2) ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿ.ಟಿ.ಇ 01 ಇಎಪಿ 2024 ದಿನಾಂಕ:23.04.2025 |

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರನ್ವಯ ಸಿ-03, ಸಿ-09, ಮತ್ತು ಸಿ-15 ಪಠ್ಯಕ್ರಮದಲ್ಲಿ ಪ್ರಥಮ/ಲ್ಯಾಟರಲ್ ಎಂಟ್ರಿ ಮುಖಾಂತರ ತೃತೀಯ ಸೆಮಿಸ್ಟರ್ ಗೆ ಪ್ರವೇಶ ಪಡೆದು **09/06** ವರ್ಷಗಳ ಕಾಲಾವಧಿ ಮೀರಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಏಪ್ರಿಲ್/ಮೇ-2025 ರ ಪರೀಕ್ಷೆಗೆ ಹಾಜರಾಗಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

ಅದರಂತೆ, ಉಲ್ಲೇಖ (2) ರಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ ದಂಡರಹಿತವಾಗಿ ನಿಗದಿತ ಪರೀಕ್ಷಾ ಶುಲ್ಕ ಪಾವತಿಸಿ ಏಪ್ರಿಲ್/ಮೇ-2025ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ದಿನಾಂಕ:**26.04.2025** ರವರೆಗೆ ಕಾಲಾವಕಾಶ ನೀಡಲಾಗಿದೆ.

ಮುಂದುವರೆದು, ಸಿ-03 ಪಠ್ಯಕ್ರಮದಲ್ಲಿ ಪ್ರವೇಶ ಪಡೆದು ಅನುತ್ತೀರ್ಣಗೊಂಡಿರುವ ವಿದಾರ್ಥಿಗಳು ಏಪ್ರಿಲ್/ಮೇ 2025 ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಪರೀಕ್ಷಾ ಶುಲ್ಕದ ಜೊತೆಗೆ ಸಮಾನಾಂತರವಲ್ಲದ (No Equivalent) ಪ್ರತಿ ವಿಷಯಕ್ಕೆ ರೂ.1000/- ಶುಲ್ಕ ಪಾವತಿಸಿಕೊಳ್ಳುವಂತೆ ಎಲ್ಲಾ ಸಂಸ್ಥೆಗಳ ಪ್ರಾಂಶುಪಾಲರಿಗೆ ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ,

1) ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳು- ಮಾಹಿತಿಗಾಗಿ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸುವ ಸಲುವಾಗಿ
2) ಶ್ರೀ ಹರೀಶ ಶೆಟ್ಟಿ, ಪ್ರಿನ್ಸಿಪಾಲರು, ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್, ಮಂಗಳೂರು –ಅಗತ್ಯ ಕ್ರಮಕ್ಕಾಗಿ

**ಪ್ರತಿ:**

1. ಆಯುಕ್ತರ ಆಪ್ತ ಶಾಖೆ - ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತ ಶಾಖೆ- ಅವಗಾಹನೆಗಾಗಿ.
3. ಇ-ಗವರ್ನೆನ್ಸ್ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
4. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
5. ರಿಜಿಸ್ಟ್ರಾರ್ (ಪರೀಕ್ಷೆ)
6. ಕಾರ್ಯದರ್ಶಿಯವರ ಆಪ್ತ ಶಾಖೆ
7. ಉಪ ನಿರ್ದೇಶಕರು (ಪರೀಕ್ಷೆ)
8. ಗಣಕ ಕೇಂದ್ರ ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು